**Akashvani : Bangalore**
**Regional Bulletin In Kannada**
**14.04.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**14.04.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ನಾಳೆ ಮಂಡ್ಯದ ಆದಿಚುಂಚನಗಿರಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಂದ ಭೈರವೈಕ್ಯ ಮಂದಿರ ಲೋಕಾರ್ಪಣೆ; ಜಿಲ್ಲೆಯಲ್ಲಿ ಬಿಗಿಭದ್ರತೆ**

**೨. ರಾಜ್ಯದೆಲ್ಲೆಡೆ ಡಾ.ಬಿ.ಆರ್.ಅಂಬೇಡ್ಕರ್ ಅವರ ೧೩೫ನೇ ಜಯಂತಿ ಆಚರಣೆ; ವಿಧಾನಸೌಧದಲ್ಲಿ ಮುಖ್ಯಮಂತ್ರಿ ಅವರಿಂದ ಸಂವಿಧಾನ ಶಿಲ್ಪಿಗೆ ಗೌರವ ನಮನ**

**೩. ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ನಸೀರ್ ಅಹಮ್ಮದ್ ವಜಾಗೊಳಿಸಿದ ಸರ್ಕಾರ**

**೪. ಮಹಿಳಾ ಮೀಸಲಾತಿ ಮಸೂದೆ; ಕೇಂದ್ರ ಸರ್ಕಾರ ಸರ್ವಪಕ್ಷಗಳ ಸಲಹೆ ಪಡೆಯುವಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸಲಹೆ**

**<><*<><>*><>**

ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಆದಿಚುಂಚನಗಿರಿ ಕ್ಷೇತ್ರಕ್ಕೆ ಪ್ರಧಾನಿ ನರೇಂದ್ರ ಮೋದಿ ನಾಳೆ ಆಗಮಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ನಾಳೆ ಮಧ್ಯಾಹ್ನದವರೆಗೆ ಕ್ಷೇತ್ರಕ್ಕೆ ಭಕ್ತರಿಗೆ ಪ್ರವೇಶ ನಿರ್ಬಂಧಿಸಿರುವುದಾಗಿ ಪೀಠಾಧ್ಯಕ್ಷ ಡಾ.ನಿರ್ಮಲಾನಂದ ಸ್ವಾಮೀಜಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರು ಭೈರವೈಕ್ಯ ಮಂದಿರ ಹಾಗೂ ಬಾಲಗಂಗಾಧರನಾಥ ಶ್ರೀಗಳ ಗದ್ದುಗೆ ಉದ್ಘಾಟನಾ ಕಾರ್ಯ ನೆರವೇರಿಸಲಿದ್ದಾರೆ. ಇದು ಪಕ್ಷಾತೀತ ಕಾರ್ಯಕ್ರಮವಾಗಿದ್ದು, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೇರಿದಂತೆ ರಾಜ್ಯದ ಹಲವು ಸಚಿವರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಪ್ರಧಾನಿಯವರ ಆಗಮನದ ಹಿನ್ನೆಲೆಯಲ್ಲಿ ಕ್ಷೇತ್ರದಲ್ಲಿ ನಾಳೆ ಹೆಚ್ಚಿನ ಭದ್ರತೆ. ಒದಗಿಸಲಾಗುತ್ತಿದೆ. ನಾಳೆ ಮಧ್ಯಾಹ್ನದ ಬಳಿಕ ಭಕ್ತರಿಗೆ ಎಂದಿನಂತೆ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಶ್ರೀ ಗುರು ಭೈರವೈಕ್ಯ ಮಂದಿರವನ್ನು ನೂರು

ಕೋಟಿ ರೂಪಾಯಿಗೂ ಹೆಚ್ಚು ವೆಚ್ಚದಲ್ಲಿ ಒರಿಸ್ಸಾದ ಸೂರ್ಯದೇಗುಲದ ಕಲೆಯನ್ನು ಒಳಗೊಂಡು ಸುಂದರವಾಗಿ ನಿರ್ಮಾಣ ಮಾಡಲಾಗಿದೆ. ಈ ಮಂದಿರದಲ್ಲಿ ಹೊಯ್ಸಳ, ಚೋಳ, ಚಾಲುಕ್ಯ ಮತ್ತು ಗಂಗ ವಾಸ್ತು ಶಿಲ್ಪದ ಸಮ್ಮಿಶ್ರಣವನ್ನು ಕಾಣಬಹುದಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ವಿಧಾನಸೌಧಲ್ಲಿಂದು ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಆರ್.ಅಂಬೇಡ್ಕರ್ ಅವರ ೧೩೫ನೇ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಗೌರವ ನಮನ ಸಲ್ಲಿಸಿದರು. ಬಳಿಕ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅಂಬೇಡ್ಕರ್ ಪ್ರಶಸ್ತಿ ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಂಬೇಡ್ಕರ್ ಅವರ ಕನಸಿನಂತೆ ಸಮಾಜದಲ್ಲಿ ಇಂದಿಗೂ ಸಂಪೂರ್ಣವಾಗಿ ಸಮಾನತೆ ಸಿಕ್ಕಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ದೇಶದ ರಾಜಕೀಯ ಸ್ವಾತಂತ್ರ್ಯ ಸಾಮಾಜಿಕ ಹಾಗೂ ಆರ್ಥಿಕ ಸ್ವಾತಂತ್ರ್ಯದ ಮೇಲೆ ನಿಂತಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ**

ಶಾಸಕ ರಿಜ್ವಾನ್ ಅರ್ಷದ್ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಸಚಿವರಾದ ಹೆಚ್.ಸಿ.ಮಹದೇವಪ್ಪ, ಕೆ.ಹೆಚ್.ಮುನಿಯಪ್ಪ, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹಮದ್, ಮಾಜಿ ಸಚಿವ ಹೆಚ್. ಆಂಜನೇಯ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

**<><*<><>*><>**

ಬೆಂಗಳೂರು ಆಕಾಶವಾಣಿ ಕೇಂದ್ರದಲ್ಲೂ ಇಂದು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಈ ವೇಳೆ, ಬೆಂಗಳೂರು ಆಕಾಶವಾಣಿಯ ಉಪಮಹಾನಿರ್ದೇಶಕರಾದ ಕೆ.ಪಿ.ಸಂಜೀವ್, ಸುದ್ದಿವಿಭಾಗದ ಸಹಾಯಕ ನಿರ್ದೇಶಕರಾದ ಸುಹಾಸ್ ಆರ್ ಸೇರಿದಂತೆ ಆಕಾಶವಾಣಿಯ ಆಡಳಿತ, ಕಾರ್ಯಕ್ರಮ, ಇಂಜಿನೀಯರಿಂಗ್ ಹಾಗೂ ಸುದ್ದಿ ವಿಭಾಗ ಸೇರಿದಂತೆ ಎಲ್ಲಾ ವಿಭಾಗಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದು, ಬಾಬಾ ಸಾಹೇಬರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು. ಉಪಮಹಾನಿರ್ದೇಶಕ ಕೆ.ಪಿ.ಸಂಜೀವ್ ಮಾತನಾಡಿ, ಸ್ವಾತಂತ್ರ್ಯ ದೊರೆತ ಆ ಸಂದರ್ಭದಲ್ಲಿ ಸಂವಿಧಾನ ರಚಿಸುವ ಮಹತ್ತರ ಜವಾಬ್ದಾರಿ ಹೊತ್ತ

ಡಾ.ಬಿ.ಆರ್.ಅಂಬೇಡ್ಕರ್ ಅವರು, ಸಮಾಜ ಬದಲಾಗುತ್ತಿರುವಂತೆ, ಸಂವಿಧಾನದಲ್ಲೂ ಸೂಕ್ತ ರೀತಿಯಲ್ಲಿ ತಿದ್ದುಪಡಿ ತರಲು ಅವಕಾಶ ಕಲ್ಪಿಸಿಕೊಟ್ಟಿದ್ದಾರೆ. ಸಂವಿಧಾನಕ್ಕೆ ಅನುಗುಣವಾಗಿ ನಡೆದು, ಅದನ್ನು ಎತ್ತಿಹಿಡಿಯುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಿಳಿಸಿದರು.

<><*<><>*><>

ರಾಜ್ಯದೆಲ್ಲೆಡೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ೧೩೫ನೇ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಬೆಂಗಳೂರಿನ ಜಿಬಿಎ ಕೇಂದ್ರ ಕಚೇರಿಯಲ್ಲಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ವಿಜಯಪುರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ೧೩೫ನೇ ಜಯಂತಿಯ ಅಂಗವಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ್, ಡಾ.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್ ಅಂಬೇಡ್ಕರ್ ಹಾಗೂ ಹಸಿರು ಕ್ರಾಂತಿ ಹರಿಕಾರ, ಮಾಜಿ ಉಪ ಪ್ರಧಾನಿ ಡಾ ಬಾಬು ಜಗಜೀವನ ರಾಮ್ ಅವರ ೧೧೯ ನೇ ಜನ್ಮದಿನಾಚರಣೆ ಸಮಾರಂಭ ಗದಗದಲ್ಲಿಯೂ ಆಚರಿಸಲಾಯಿತು. ಡಾ ಬಿ ಆರ್ ಅಂಬೇಡ್ಕರ್ ಮತ್ತು ಡಾ ಬಾಬು ಜಗಜೀವನರಾಮ್ ಅವರ ಭಾವಚಿತ್ರದ ಮೆರವಣಿಗೆಗೆ ಗದಗ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಚಾಲನೆ ನೀಡಿದರು. ಕೊಪ್ಪಳ ಜಿಲ್ಲಾಡಳಿತ ಭವನದ ಮುಂದೆ ಶಿಲೆಯಲ್ಲಿ ನಿರ್ಮಿಸಿದ ಭಾರತ ಸಂವಿಧಾನದ ಪ್ರಸ್ತಾವನೆಯನ್ನು ಸಂಸದ ರಾಜಶೇಖರ ಹಿಟ್ನಾಳ್ ಹಾಗೂ ವಿಧಾನ ಪರಿಷತ್ ಸದಸ್ಯ ಹೇಮಲತಾ ನಾಯಕ್ ಅನಾವರಣಗೊಳಿಸಿದರು. ಮಂಡ್ಯ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಇರುವ ಅಂಬೇಡ್ಕರ್ ಪ್ರತಿಮೆಗೆ ಜಿಲ್ಲಾಡಳಿತದ ವತಿಯಿಂದ ಮಾಲಾರ್ಪಣೆ ಮಾಡಲಾಯಿತು. ಜಿಲ್ಲಾಧಿಕಾರಿ ಡಾ.ಕುಮಾರ, ಪೊಲೀಸ್ ವರಿಷ್ಠಾಧಿಕಾರಿ ಡಾ.ವಿ.ಜೆ.ಶೋಭಾ ರಾಣಿ ಸೇರಿದಂತೆ ಹಲವು ಅಧಿಕಾರಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಕೋಲಾರದ ಬಂಗಾರಪೇಟೆ ವೃತ್ತದಲ್ಲಿರುವ ಅಂಬೇಡ್ಕರ್ ಪುತ್ಥಳಿಗೆ ಸಂಸದ ಎಂ.ಮಲ್ಲೇಶ್ ಬಾಬು ಹಾಗೂ ಶಾಸಕ ಕೊತ್ತೂರು ಮಂಜುನಾಥ್ ಪುಷ್ಪ ನಮನ ಸಲ್ಲಿಸಿದರು. ಬಳಿಕ ಅವರು ಡಾ.ಬಿ.ಆರ್.ಅಂಬೇಡ್ಕರ್ ಸ್ಥಬ್ದ ಚಿತ್ರಗಳಿಗೆ ಚಾಲನೆ ನೀಡಿದರು. ದಾವಣಗೆರೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಜನ್ಮ ದಿನಾಚರಣೆ ಆಚರಿಸಲಾಯಿತು. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಯಾವುದೇ ಅದ್ದೂರಿ ಕಾರ್ಯಕ್ರಮಗಳಿಗೆ ಅವಕಾಶ ನೀಡದೆ ಸರಳವಾಗಿ ಜಯಂತಿ ಆಚರಿಸಲಾಯಿತು. ಹಾಸನ ಜಿಲ್ಲಾಡಳಿತದ ವತಿಯಿಂದ ಆಯೋಜಿಸಲಾಗಿದ್ದ ಆಕರ್ಷಕ ಮೆರವಣಿಗೆಗೆ ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಹಾಗೂ ಶಾಸಕ ಸ್ವರೂಪ್ ಪ್ರಕಾಶ್ ಚಾಲನೆ

ನೀಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು. ಗಣಿನಾಡು ಬಳ್ಳಾರಿಯಲ್ಲಿಯೂ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ಭಾವ ಚಿತ್ರದ ಮೆರವಣಿಗೆ ನಡೆಯಿತು.

<><*<><>*><>

ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ವಿರುದ್ಧ ಮುಸ್ಲೀಂ ಮತದಾರರನ್ನು ಪ್ರಚೋದಿಸಿದ ವಿವಾದದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ನಸೀರ್ ಅಹ್ಮದ್ ಅವರನ್ನು ವಜಾಗೊಳಿಸಲಾಗಿದೆ. ದಾವಣಗೆರೆ ಉಪಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ವಿರುದ್ಧ ಕಾರ್ಯ ನಿರ್ವಹಿಸಿದ ಆರೋಪದ ಹಿನ್ನೆಲೆಯಲ್ಲಿ ಅವರನ್ನು ಹುದ್ದೆಯಿಂದ ವಜಾಗೊಳಿಸಲಾಗಿದೆ. ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಉಪಕಾರ್ಯದರ್ಶಿ ಬಿ.ಅಭಿಜಿನ್ ಆದೇಶ ಹೊರಡಿಸಿದ್ದಾರೆ.

<><*<><>*><>

ಕೇಂದ್ರ ಸರ್ಕಾರ ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ಮಸೂದೆ ಮಂಡಿಸುವ ಮೊದಲು ಸರ್ವಪಕ್ಷಗಳ ಸಭೆ ಕರೆದು, ಸಲಹೆ ಪಡೆದುಕೊಳ್ಳಬೇಕು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದ ಅವಧಿಯಲ್ಲಿ ಮಹಿಳಾ ಮೀಸಲಾತಿ ಮಸೂದೆಗೆ ರಾಜ್ಯಸಭೆಯಲ್ಲಿ ಒಪ್ಪಿಗೆ ಸಿಕ್ಕಿತ್ತು, ಲೋಕಸಭೆಯಲ್ಲಿ ಕಾಂಗ್ರೆಸ್ ಗೆ ಬಹುಮತ ಇಲ್ಲದ ಹಿನ್ನೆಲೆಯಲ್ಲಿ ವಿಧೇಯಕ ಪಾಸ್ ಆಗಿರಲಿಲ್ಲ, ಆಧುನಿಕ ಜಗತ್ತಿನಲ್ಲಿ ಮಹಿಳೆಯ ಹಕ್ಕು ಮತ್ತು ಪ್ರಾತಿನಿಧ್ಯ ಪ್ರಮುಖವಾಗಿದ್ದು, ಏಕಾಏಕಿ ಮಸೂದೆಯನ್ನು ಜಾರಿಗೆ ತರುವ ಬದಲು ಸರ್ವ ಪಕ್ಷಗಳ ಸಭೆ ಕರೆದು ಮಸೂದೆಯ ಬಗ್ಗೆ ಸಲಹೆ ಪಡೆಯಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ನಂದಿನಿ ಉತ್ಪನ್ನ ತಯಾರಿಕೆಗೆ ಸಿಲಿಂಡರ್ ಕೊರತೆ ಇಲ್ಲ ಎಂದು ಪಶಸಂಗೋಪನಾ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ಚಾಮರಾಜನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಂದಿನಿ ಉತ್ಪನ್ನ ತಯಾರಿಕೆಗೆ ಸಿಲಿಂಡರ್ ಪೂರೈಕೆ ಮಾಡುವಂತೆ ವಿಶೇಷ ಮನವಿ ಮಾಡಿಕೊಂಡಿದ್ದು, ಸಿಲಿಂಡರ್ ಪೂರೈಕೆಯಾಗುತ್ತಿದೆ ಎಂದು ಹೇಳಿದ್ದಾರೆ. ಬೇಸಿಗೆ ಅವಧಿಯಲ್ಲಿ ನಂದಿನಿ ಉತ್ಪನ್ನಗಳ ಮಾರಾಟ ಮತ್ತಷ್ಟು ಹೆಚ್ಚಾಗುವ ನಿರೀಕ್ಷೆ ಇದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಆಡಳಿತ ಸಂಪೂರ್ಣವಾಗಿ ಕುಸಿದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.  ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಂತರಿಕ ಅಧಿಕಾರ ಹೋರಾಟಗಳ ನಡುವೆ ಸರ್ಕಾರ ಆಡಳಿತವನ್ನು ನಿರ್ಲಕ್ಷಿಸುತ್ತಿದೆ ಎಂದು ಆರೋಪಿಸಿದ್ದಾರೆ. ಕೆಲ ಶಾಸಕರು ದೆಹಲಿಯಲ್ಲಿ ಸಚಿವ ಸ್ಥಾನಕ್ಕಾಗಿ ಲಾಬಿಯಲ್ಲಿ ನಿರತರಾಗಿದ್ದಾರೆ ಎಂದು ಸರ್ಕಾರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮುಖ್ಯಮಂತ್ರಿ ಹುದ್ದೆಯ ಜಗಳವು ಆಡಳಿತ ಕುಸಿಯಲು ಪ್ರಮುಖ ಕಾರಣ ಎಂದು ದೂರಿದ್ದಾರೆ.

**<><*<><>*><>**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಂಡೋಸಲ್ಫಾನ್ ಸಂತ್ರಸ್ತರಿಗೆ ವಿಶೇಷ ಆರೋಗ್ಯ ತಪಾಸಣಾ ಶಿಬಿರಗಳನ್ನು ನಾಳೆಯಿಂದ ಜಿಲ್ಲೆಯ ಖಾಸಗಿ ವೈದ್ಯಕೀಯ ಕಾಲೇಜುಗಳ ಸಹಯೋಗದೊಂದಿಗೆ ಏರ್ಪಡಿಸಲಾಗಿದೆ.

**<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ  ><><<>**